**ಪ್ರಭಾರ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ. 1018/2020**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಟಿ.ಮಂಜಣ್ಣ | ಪ್ರಾ.ಸಾ.3 |
| ತಂದೆಯ/ಗಂಡನ ಹೆಸರು | : | ತಿಮ್ಮಪ್ಪ | ಚಾ.ಸಾ.9 |
| ವಯಸ್ಸು | : | 45 ವರ್ಷ | |
| ಕೆಲಸ | : | ಪಿ.ಐ., ರಾಜ್ಯ ಗುಪ್ತ ವಾರ್ತೆ ಬೆಂಗಳೂರು | ಸಾ ಪ್ರ ಬೋ |
| ವಾಸ | : | ಬೆಂಗಳೂರು | ದಿಃ13.03.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ನಾನು ದಿನಾಂಕ ದಿ.26.09.2010 ರಿಂದ 01.08.2012 ರವರೆಗೆ ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 15.02.2012 ರಂದು ಈ ಪ್ರಕರಣದ ಕಡತವನ್ನು ಚಾಸಾ.8 ರವರಿಂದ ಪಡೆದುಕೊಂಡು ಅಲ್ಲಿಯವರೆಗಿನ ತನಿಖೆಯನ್ನು ಪರಿಶೀಲಿಸಿರುತ್ತೇನೆ. ಅದೇ ದಿನ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ.4 ರವರು ಸ್ಥಳ ತೋರಿಸಿದ ಮೇರೆಗೆ ಚಾಸಾ.6 ಮತ್ತು 7 ರವರ ಸಮಕ್ಷಮ ಬೆಳಗ್ಗೆ 10 ರಿಂದ 10.45 ಗಂಟೆಯವರೆಗೆ ಸ್ಥಳ ಮಹಜರನ್ನು ಜರುಗಿಸಿರುತ್ತೇನೆ. ಸಾಕ್ಷಿ ಸ್ಥಳ ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ನಿಪಿ.3 ಎಂದು, ಸಾಕ್ಷಿಯ ಸಹಿಯನ್ನು ನಿಪಿ.3(ಎ) ಎಂದು ಗುರುತಿಸಲಾಯಿತು. ಅದೇ ಸಮಯದಲ್ಲಿ ಚಾಸಾ.2 ರಿಂದ 5 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ ಮತ್ತು ಚಾಸಾ.1 ರವರ ಮರು ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಆರೋಪಿತರ ವಿರುದ್ಧ ಆರೋಪ ರುಜುವಾತಾದ ಹಿನ್ನಲೆಯಲ್ಲಿ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**ಪಾಟೀ ಸವಾಲು : ಆರೋಪಿ ಪರ ಶ್ರೀ ಯು.ಎಸ್. ವಕೀಲರಿಂದ**

3. ಚಾಸಾ.2 ರಿಂದ 5 ರವರನ್ನು ವಿಚಾರಣೆ ಮಾಡಿ, ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಸದರಿ ಸಾಕ್ಷಿದಾರರ ಹೇಳಿಕೆಗಳ ಆಧಾರದಲ್ಲಿ 1 ನೇ ಆರೋಪಿತನ ತಪ್ಪು ಇದೆ ಎಂದು ಕಂಡುಬಂದಿರುತ್ತದೆ. ನನ್ನ ತನಿಖೆಯ ಕಾಲಕ್ಕೆ 3 ನೇ ಆರೋಪಿತರ ತಪ್ಪು ಇಲ್ಲ ಎಂದು ಕಂಡುಬಂದಿತ್ತು ಎಂದರೆ ಸರಿ. ನನ್ನ ತನಿಖೆಯ ಕಾಲಕ್ಕೆ ಚಾಸಾ.1 ಮತ್ತು 1 ನೇ ಆರೋಪಿತರ ವಿವಾಹ ಏರ್ಪಟ್ಟ ದಿನಾಂಕದ ಕುರಿತು ಮತ್ತು ಸ್ಥಳದ ಕುರಿತು ದಾಖಲಾತಿಗಳನ್ನು ಪಡೆದುಕೊಂಡಿಲ್ಲ. ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಚಾಸಾ.1

ಮತ್ತು 1 ನೇ ಆರೋಪಿತರ ವಿವಾಹದ ಕುರಿತಾಗಿ ಛಾಯಾಚಿತ್ರ ಮತ್ತು ವಿವಾಹ ಆಮಂತ್ರಣ ಪತ್ರಿಕೆಯನ್ನು ಪಡೆದುಕೊಂಡಿಲ್ಲ. ಈ ಪ್ರಕರಣ ದಾಖಲಾಗುವ ಪೂರ್ವದಲ್ಲಿ ಚಾಸಾ.1 ಮತ್ತು 1 ನೇ ಆರೋಪಿತರ ನಡುವೆ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿರುವ ಕುರಿತು ವಿಚಾರಣೆ ಮಾಡಿಲ್ಲ. ಈ ಪ್ರಕರಣ ದಾಖಲಾಗುವ ಪೂರ್ವದಲ್ಲಿಯೇ ಚಾಸಾ.1 ಮತ್ತು ಮೃತ 1 ನೇ ಆರೋಪಿತನ ನಡುವೆ ವಿಚ್ಛೇಧನದ ಕುರಿತು ಮಾನ್ಯ ಕೌಂಟುಂಬಿಕ ನ್ಯಾಯಾಲಯ, ದಾವಣಗೆರೆಯಲ್ಲಿ ಡಿಕ್ರಿಯಾಗಿತ್ತು ಎಂದರೆ ಗೊತ್ತಿಲ್ಲ. ಚಾಸಾ.1 ರವರು ನೀಡಿದ ಸುಳ್ಳು ದೂರಿನ ಆಧಾರದಲ್ಲಿ ಆರೋಪಿತನ ವಿರುದ್ಧ ಸುಳ್ಳು ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. 3 ನೇ ಆರೋಪಿತನು ಮೃತ 1 ಮತ್ತು 2 ನೇ ಆರೋಪಿತರೊಂದಿಗೆ ಸೇರಿಕೊಂಡು ಚಾಸಾ.1 ರವರಿಗೆ ಅವಾಚ್ಯ ಶಬ್ಧಗಳಿಂದ ಬೈದಿಲ್ಲ, ಮತ್ತು ಮಾನಸಿಕವಾಗಿ ಮತ್ತು ದೈಹಿಕವಾಗಿ ಹಿಂಸೆ ನೀಡಿಲ್ಲ ಎಂದರೆ ಸರಿಯಲ್ಲ. 3 ನೇ ಆರೋಪಿತನು ಮೃತ 1 ಮತ್ತು 2 ನೇ ಆರೋಪಿತರೊಂದಿಗೆ ಸೇರಿಕೊಂಡು ಚಾಸಾ.1 ರವರಿಗೆ ಕೊಲೆ ಬೆದರಿಕೆ ಹಾಕಿಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿನ ಎಲ್ಲಾ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರುವಿಚಾರಣೆ : ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಪ್ರಭಾರ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ